# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 787(922) |
| ಉತ್ತರಿಸಬೇಕಾದ ದಿನಾಂಕ | : | 13.12.2023 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ( ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಬಡ ಕುಟುಂಬದ ಸದಸ್ಯ ಮರಣ ಹೊಂದಿದ ವೇಳೆ ಅಂತ್ಯ ಸಂಸ್ಕಾರ ನಡೆಸಲು ಸರ್ಕಾರದಿಂದ ಲಭಿಸುತ್ತಿದ್ದ 5 ಸಾವಿರ ಸಹಾಯಧನ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ.<br>ರಾಷ್ಟ್ರೀಯ ಕುಟುಂಬ ನೆರವು ಯೋಜನೆಯಡಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ಮುಖ್ಯ ವ್ಯಕ್ತಿ ಮರಣ ಹೊಂದಿದಲ್ಲಿ ಆ ಕುಟುಂಬದ ನೆರವಿಗಾಗಿ ರೂ.20000/-ಗಳ ಸಹಾಯ ಧನವನ್ನು ನೀಡಲಾಗುತ್ತಿದೆ.<br>ಅಂತ್ಯ ಸಂಸ್ಕಾರ ಯೋಜನೆ ಮತ್ತು ರಾಷ್ಟ್ರೀಯ ಕುಟುಂಬ ನೆರವು ಯೋಜನೆ ಎರಡು ಯೋಜನೆಗಳು ಸಮಾನಾಂತರ ಯೋಜನೆಗಳಾಗಿದ್ದು, ಬಡತನ ರೇಖೆಗಿಂತ ಕೆಳಗಿರುವ ಕುಟುಂಬಕ್ಕೆ ಸದಸ್ಯರ ಮರಣ ಸಂದರ್ಭದಲ್ಲಿ ಸೌಲಭ್ಯವನ್ನು ಒದಗಿಸಲಾಗುತ್ತಿದೆ. ಅಂತೆಯೇ ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ/462/ವೆಚ್ಚ-7/2021 ದಿನಾಂಕ: 17/07/2021 ರಲ್ಲಿ 2021-22ನೇ ಸಾಲಿನಲ್ಲಿ ಸದರಿ ಯೋಜನೆಯಡಿ ಯಾವುದೇ ಅರ್ಜಿ ಸ್ವೀಕರಿಸದಿರಲು ಸೂಚಿಸಿದ್ದು. ಟಿಪ್ಪಣಿ ಸಂಖ್ಯೆ: ಆಇ/462/ವೆಚ್ಚ-7/2021ದಿನಾಂಕ: 7/02/2022 ರಲ್ಲಿಆಗಸ್ಟ 2021ರ ಅಂತ್ಯಕ್ಕೆ ಸ್ವೀಕೃತವಾಗಿರುವ ಅರ್ಜಿಗಳಿಗೆ ಸೌಲಭ್ಯ ವಿತರಿಸಲು ಅಗತ್ಯವಿದ್ದ ಅನುದಾನ ಒದಗಿಸಿ ಅಂತ್ಯಸಂಸ್ಕಾರ ಯೋಜನೆಯನ್ನು ಮುಕ್ತಾಯಗೊಳಿಸಲು ತಿಳಿಸಿದೆ.<br>ಸರ್ಕಾರದ ಸುತ್ತೋಲೆ ಸಂಖ್ಯೆ: ಡಿ.ಎಸ್.ಎಸ್.ಪಿ/ ಎ.ಎಸ್.ವೈ/3/2022 ದಿನಾಂಕ: 10/05/2022 ರಂತೆ ದಿನಾಂಕ: 01/09/2021 ರಿಂದ ಅನ್ವಯವಾಗುವಂತೆ ಅಂತ್ಯ ಸಂಸ್ಕಾರ ಯೋಜನೆಯನ್ನು ಮುಕ್ತಾಯಗೊಳಿಸಿದೆ. |
| ಆ) | ಬಂದಿದ್ದಲ್ಲಿ, ಕಷ್ಟ ಹಾಗೂ ನೋವಿನ ಸಂದರ್ಭದಲ್ಲಿ ನೆರವಿಗೆ ಬರಿತ್ತಿದ್ದ ಅಂತ್ಯ ಸಂಸ್ಕಾರ ಸಹಾಯನಿಧಿ ಸ್ಥಗಿತಗೊಳ್ಳಲು ಕಾರಣಗಳೇನು; | |
| ಇ) | ಅಂತ್ಯ ಸಂಸ್ಕಾರ ಸಹಾಯನಿಧಿ ಕೋರಿ ಸಲ್ಲಿಸಿರುವ ಎಷ್ಟು ಅರ್ಜಿಗಳು ಇದುವರೆಗೆ ಬಾಕಿ ಇವೆ ಹಾಗೂ ಅವುಗಳಿಗೆ ನೀಡಬೇಕಾಗಿರುವ ಒಟ್ಟು ಮೊತ್ತವೆಷ್ಟು; | ಅಂತ್ಯ ಸಂಸ್ಕಾರ ಯೋಜನೆಯಡಿ ಸಹಾಯನಿಧಿ ಕೋರಿ ಯಾವುದೇ ಅರ್ಜಿಗಳು ಬಾಕಿ ಇರುವುದಿಲ್ಲ. |
| ಈ) | ಯಾವ ಕಾಲಮಿತಿಯೊಳಗೆ ಬಾಕಿ ಇರುವ ಎಲ್ಲಾ ಅರ್ಜಿದಾರರಿಗೆ ಅಂತ್ಯ ಸಂಸ್ಕಾರ ಸಹಾಯನಿಧಿ ಹಣ ನೀಡಲಾಗುವುದು; | |

| | | |
|---|---|---|
| ಉ) | ಸಂಕಷ್ಟದ ಸಮಯದಲ್ಲಿ ಉಪಯೋಗಕ್ಕೆ ಬರುತ್ತಿದ್ದ ಅಂತ್ಯ ಸಂಸ್ಕಾರ ಸಹಾಯನಿಧಿ ಹಣ ಸಕಾಲದಲ್ಲಿ ಹಾಗೂ ತ್ವರಿತವಾಗಿ ಬಡ ಕುಟುಂಬಗಳ ಕೈ-ಸೇರುವಂತೆ ಆಗಲು ಸರ್ಕಾರ ಈಗಾಲಾದರೂ ಸೂಕ್ತ ಕ್ರಮವಹಿಸುವುದೇ? | ರಾಷ್ಟ್ರೀಯ ಕುಟುಂಬ ನೆರವು ಯೋಜನೆಯು ಪ್ರಸ್ತುತ ಅನುಷ್ಠಾನದಲ್ಲಿರುವುದರಿಂದ ಅಂತ್ಯ ಸಂಸ್ಕಾರ ಯೋಜನೆಯನ್ನು ಪುನರಾರಂಭಿಸಲು ಆರ್ಥಿಕ ಇಲಾಖೆಯು ಪುರಸ್ಕರಿಸಿರುವುದಿಲ್ಲ. |

**ಕಡತ ಸಂಖ್ಯೆ:ಆರ್‌ಡಿ 43 ಕೆಎಟಿ ಎಸ್‌ಎಸ್‌ಪಿ 2023**

**(ಕೃಷ್ಣ ಬೈರೇಗೌಡ)**
**ಕಂದಾಯ ಸಚಿವರು**